**All India Radio: Bangalore**
**Regional Bulletin In Kannada**
**18.02.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.02.2025 / 2.30 p.m.**
**<><><><>**

ಮುಖ್ಯಾಂಶಗಳು

1. ಅನಧೀಕೃತ ಬಡಾವಣೆಗಳಿಗೆ 'ಬಿ' ಖಾತಾ ನೀಡಿ ವರಮಾನ ಗಳಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
2. ಬೇಸಿಗೆಯಲ್ಲಿ ವಿದ್ಯುತ್ ಕೊರತೆ ನಿಭಾಯಿಸಲು ಹೊರ ರಾಜ್ಯಗಳೊಂದಿಗೆ ವಿದ್ಯುತ್ ವಿನಿಮಯ - ಇಂಧನ ಸಚಿವ ಕೆ.ಜೆ. ಜಾರ್ಜ್
3. ಬೆಂಗಳೂರಿನಲ್ಲಿ ಇದೇ ೨೬ ರಿಂದ ಕರ್ನಾಟಕ ಅಂತಾರಾಷ್ಟ್ರೀಯ ಪ್ರವಾಸ ಪ್ರದರ್ಶನ
4. ಬಿಬಿಎಂಪಿ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸಮೀಕ್ಷೆ - ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್

<><><><>

ಅನಧಿಕೃತ ಬಡಾವಣೆಗಳಿಗೆ 'ಬಿ' ಖಾತಾ ನೀಡಿ ಆಧಾಯಗಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ, ಕಂದಾಯ ಅಧಿಕಾರಿಗಳೊಂದಿಗೆ ಸಭೆ ನಡೆಸದ ಅವರು, ಅನಧಿಕೃತ ಬಡಾವಣೆಗಳಿಂದ ಕಂದಾಯ ಬರುತ್ತಿಲ್ಲ. ಪರಿಣಾಮ ಜನರಿಗೆ ನಾಗರಿಕ ಸವಲತ್ತುಗಳೂ ಸಿಗುತ್ತಿಲ್ಲ. ಸ್ಥಳೀಯ ಸಂಸ್ಥೆಗಳಿಗೆ ಆದಾಯವೂ ಬಂದ್ ಆಗಿದೆ. ಇದಕ್ಕೆ ಅಂತ್ಯ ಹಾಡಬೇಕಿದೆ. ಹೀಗಾಗಿ ಈ ರೀತಿಯ ನಿವೇಶನಗಳಿಗೆ 'ಬಿ' ಖಾತಾಗಳನ್ನು ನೀಡಲು ಅಭಿಯಾನ ಆರಂಭಿಸುವಂತೆ ನಿರ್ದೇಶಿಸಿದರು. ನಗರ, ಪಟ್ಟಣ, ಪಾಲಿಕೆ ವ್ಯಾಪ್ತಿ ಮತ್ತು ಹಳ್ಳಿಗಳಲ್ಲೂ ಅನಧಿಕೃತ ಬಡಾವಣೆಗಳು ಇವೆ. ಇದಕ್ಕೆ ಕಡಿವಾಣ ಹಾಕಬೇಕಿದೆ. ಮುಂದಿನ ಮೂರು ತಿಂಗಳಲ್ಲಿ ಅಭಿಯಾನ ನಡೆಸಿ, ಅನಧಿಕೃತ ನಿವೇಶನಗಳಿಗೆ 'ಬಿ' ಖಾತಾಗಳನ್ನು ನೀಡುವಂತೆ ಸೂಚಿಸಿದರು. ಅಭಿಯಾನದ ನಂತರವೂ ಅನಧಿಕೃತ ಬಡಾವಣೆಗಳು ರಾಜ್ಯದಲ್ಲಿ ಮತ್ತೆ ತಲೆ ಎತ್ತಿದರೆ, ಅದಕ್ಕೆ ಜಿಲ್ಲಾಧಿಕಾರಿ, ಮುಖ್ಯ ಅಧಿಕಾರಿ, ನಗರ ಯೋಜನಾ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಸಿದರು.

<><><><>

ಮೂರು ತಿಂಗಳಿನಿಂದ ಅನ್ನಭಾಗ್ಯ, ಗೃಹಲಕ್ಷ್ಮಿ ಹಣ ಫಲಾನುಭವಿಗಳಿಗೆ ಪಾವತಿ ಆಗಿಲ್ಲ. ಆದರೆ ಈ ಬಗ್ಗೆ ಗಮನಹರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಮಯವಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಟೀಕಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಅವರು, ತಿಳಿಸಿದ್ದು, ಕರ್ನಾಟಕ ಕಂಡ ಅತ್ಯಂತ ಅಸಮರ್ಥ ಮುಖ್ಯಮಂತ್ರಿ ಎಂಬ ಹಣೆಪಟ್ಟಿ ಗಳಿಸುವ ಬದಲು, ಈಗಲಾದರೂ ಸಿದ್ದರಾಮಯ್ಯ ರಾಜೀನಾಮೆ ನೀಡಿ, ಗೌರವದಿಂದ ನಿರ್ಗಮಿಸಬೇಕು ಎಂದು ಆಗ್ರಹಿಸಿದರು.

<><><><>

ಬೇಸಿಗೆಯಲ್ಲಿ ಸಂಭವನೀಯ ವಿದ್ಯುತ್ ಕೊರತೆ ನಿಭಾಯಿಸುವ ನಿಟ್ಟಿನಲ್ಲಿ ಹೊರ ರಾಜ್ಯಗಳಿಂದ ವಿದ್ಯುತ್ ವಿನಿಮಯಕ್ಕೆ ಆದ್ಯತೆ ನೀಡಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಇಂಧನ ಇಲಾಖೆಯ ಪ್ರಗತಿ ಪರಿಶೀಲನೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಉತ್ತರ ಪ್ರದೇಶ ಮತ್ತು ಪಂಜಾಬ್ ಜೊತೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಧ್ವನಿ: ಕೆ.ಜೆ.ಜಾರ್ಜ್

ಕಳೆದ ಬಾರಿ ಬರಗಾಲ ಇದ್ದರೂ ೧ ತಿಂಗಳು ಮಾತ್ರ ವಿದ್ಯುತ್ ಪೂರೈಕೆ ಕೊರತೆಯಾಗಿತ್ತು. ಆದರೆ ಈ ಬಾರಿ ಪೂರ್ಣ ಪ್ರಮಾಣದಲ್ಲಿ ವಿದ್ಯುತ್ ಪೂರೈಕೆ ಮಾಡಲಾಗುವುದು. ಈಗಾಗಲೇ ೧೮ ಸಾವಿರದ ೫೦೦ ಮೆಗಾವ್ಯಾಟ್ ಬೇಡಿಕೆ ಹೆಚ್ಚಿದ್ದು, ಕೊರತೆ ನೀಗಿಸಲು ಎಲ್ಲ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು. ಪ್ರಧಾನಮಂತ್ರಿ ಕುಸುಮ್-ಸಿ ಮಹತ್ವಕಾಂಕ್ಷೆಯ ಯೋಜನೆಯಾಗಿದ್ದು, ಮುಂದಿನ ಮೂರುವರೆ ವರ್ಷದಲ್ಲಿ ೩ ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ ಹೊಂದಲಾಗಿದೆ ಎಂದು ಅವರು ಹೇಳಿದರು.

<><><><>

ಪ್ರವಾಸೋದ್ಯಮ ಇಲಾಖೆ ವತಿಯಿಂದ ಇದೇ ೨೬ ರಿಂದ ೨೮ ರವರೆಗೆ ಬೆಂಗಳೂರಿನಲ್ಲಿ  'ಕರ್ನಾಟಕ ಅಂತಾರಾಷ್ಟ್ರೀಯ ಪ್ರವಾಸ ಪ್ರದರ್ಶನ-೨೦೨೫' ರ ೨ನೇ ಆವೃತ್ತಿಯನ್ನು ಆಯೋಜಿಸಲಾಗಿದೆ ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪ್ರವಾಸೋದ್ಯಮ ಸಮಿತಿ ಅಧ್ಯಕ್ಷೆ ಕೆ. ಲಕ್ಷ್ಮಿಪ್ರಿಯ ತಿಳಿಸಿದ್ದಾರೆ. ಈ ಕಾರ್ಯಕ್ರಮವು ರಾಜ್ಯದ ರೋಮಾಂಚಕ ಪ್ರವಾಸೋದ್ಯಮ ಕ್ಷೇತ್ರವನ್ನು ಪ್ರದರ್ಶಿಸಲು, ವ್ಯಾಪಾರ ಅವಕಾಶಗಳನ್ನು ಆಕರ್ಷಿಸಲು ಮತ್ತು ಪ್ರಮುಖ ಜಾಗತಿಕ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ. ಈ ಕಾರ್ಯಕ್ರಮದಲ್ಲಿ ೪೦೦ ಕ್ಕೂ ಹೆಚ್ಚು ಖರೀದಿದಾರರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ವಿಶೇಷವಾಗಿ ಉತ್ತರ ಕನ್ನಡ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳು, ಪ್ರವಾಸೋದ್ಯಮ ಉತ್ಪನ್ನಗಳು ಮತ್ತು ಸೇವೆಗಳು, ಸಾಂಸ್ಕೃತಿಕ ಪರಂಪರೆ, ಅನನ್ಯ ಪರಂಪರೆಗಳನ್ನು ಬಿಂಬಿಸುವಂತಹ ಪ್ರವಾಸಿ ಯೋಜನೆಗಳನ್ನು ಈ ಕಾರ್ಯಕ್ರಮದಲ್ಲಿ ಪ್ರಚುರಪಡಿಸಲಾಗುತ್ತದೆ. ಜಿಲ್ಲೆಯ ಎಲ್ಲಾ ಆಸಕ್ತ ಪ್ರವಾಸೋದ್ಯಮ ಪಾಲುದಾರರು, ಸ್ಥಳೀಯ ರೇಸಾರ್ಟ್ ಮಾಲೀಕರು, ಹೋಟೆಲ್ ಮಾಲೀಕರು ಹಾಗೂ ಇತರೆ ಉದ್ಯಮ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.  ಹೆಚ್ಚಿನ ಮಾಹಿತಿಗಾಗಿ karnatakatravelexpo.org ಅಥವಾ  ಮೊಬೈಲ್ ಸಂಖ್ಯೆ ೮೭೨೨೨೭೭೧೩೨ ಕ್ಕೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

<><><><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳ ಸಮೀಕ್ಷೆ ನಡೆಸಿ, ವರದಿ ನೀಡಲು ಅಧಿಕಾರಿಗಳಿಗೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾಲಿಕೆಯ

೮ ವಲಯಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿವೆ, ಎಷ್ಟು ಸುಸ್ಥಿತಿಯಲ್ಲಿವೆ, ಎಷ್ಟು ಸ್ಥಗಿತವಾಗಿವೆ ಎಂಬುದರ ಕುರಿತು ಸಮೀಕ್ಷೆ ನಡೆಸಿ, ವಾರದೊಳಗಾಗಿ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

<><><><>

ರಾಜ್ಯದಲ್ಲಿ ಪ್ರಾರಂಭಿಸಲಾಗಿರುವ ೧೦ ವಿಶ್ವವಿದ್ಯಾಲಯಗಳ ಪೈಕಿ ೯ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಮುಂದಾಗಿರುವ ರಾಜ್ಯ ಸರ್ಕಾರದ ನಿರ್ಧಾರ ಖಂಡಿಸಿ, ಬೆಳಗಾವಿಯಲ್ಲಿ ಇಂದು ಅಖಿಲ ಭಾರತ ವಿದ್ಯಾರ್ಥಿ ಪರಿಷತ್- ಎಬಿವಿಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಬೆಳಗಾವಿ ಚೆನ್ನಮ್ಮ ವೃತ್ತದಿಂದ ಪ್ರತಿಭಟನಾ ಮೆರವಣಿಗೆ ಆರಂಭಿಸಿ, ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ವಿಶ್ವವಿದ್ಯಾಲಯಗಳ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಮನವಿ ಸಲ್ಲಿಸಿದರು. ವಿಶ್ವವಿದ್ಯಾಲಯಗಳಿಗೆ ಅಗತ್ಯ ಸಂಪನ್ಮೂಲ ಒದಗಿಸುವುದು ಸರ್ಕಾರದ ಕರ್ತವ್ಯ. ಆರ್ಥಿಕ ಮತ್ತು ಮೂಲಸೌಲಭ್ಯಗಳ ನೆಪವೊಡ್ಡಿ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿರುವುದು ಖಂಡನೀಯ. ರಾಜ್ಯ ಸರ್ಕಾರ ಕೂಡಲೇ ವಿಶ್ವವಿದ್ಯಾಲಯಗಳಿಗೆ  ಅಗತ್ಯ ಅನುದಾನ, ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಎಬಿವಿಪಿ ಕಾರ್ಯಕರ್ತರು ಇದೇ ವೇಳೆ ಒತ್ತಾಯಿಸಿದರು.

<><><><>

ಮಂಡ್ಯ ವಿಶ್ವವಿದ್ಯಾಲಯವನ್ನು ಯಾವುದೇ ಕಾರಣಕ್ಕೂ ಮೈಸೂರು ವಿಶ್ವವಿದ್ಯಾನಿಲಯದ ಜೊತೆಗೆ ವಿಲೀನ ಮಾಡಬಾರದು ಎಂದು ಮೈಸೂರು ವಿಶ್ವವಿದ್ಯಾಲಯ ಶಿಕ್ಷಣ ಮಂಡಳಿ ಮಾಜಿ ಸದಸ್ಯ ಡಾ.ಯಮದೂರು ಸಿದ್ದರಾಜು ಒತ್ತಾಯಿಸಿದ್ದಾರೆ. ಈ ಕುರಿತು ಮಂಡ್ಯದಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಾಲ್ಕೂವರೆ ಸಾವಿರ ವಿದ್ಯಾರ್ಥಿಗಳಿರುವ ಮಂಡ್ಯ ವಿಶ್ವವಿದ್ಯಾಲಯದಲ್ಲಿ ಎಂಬಿಎ, ಎಂಸಿಎ ಸೇರಿದಂತೆ ಹಲವು ವ್ಯಾಸಂಗಕ್ಕೆ ಗ್ರಾಮೀಣ ವಿದ್ಯಾರ್ಥಿಗಳಿಗೆ ಮಂಡ್ಯ ವಿಶ್ವವಿದ್ಯಾಲಯ ವರದಾನವಾಗಿದ್ದು, ಇಂತಹ ವಿಶ್ವವಿದ್ಯಾಲಯವನ್ನು ಮುಚ್ಚಿದರೆ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

೨೦೨೪-೨೫ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಸಲು ಕೋಲಾರ ಜಿಲ್ಲೆಯಾದ್ಯಂತ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ತೊಗರಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ರೈತರು ಖರೀದಿ ಕೇಂದ್ರಗಳಿಗೆ ತೆರಳಿ ಮಾರ್ಚ್ ೧೭ ರವರೆಗೆ ನೋಂದಣಿ ಮಾಡಿಕೊಳ್ಳಬಹುದು. ಏಪ್ರಿಲ್ ೧ ರವರೆಗೆ  ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಸಂಸ್ಥೆಯ ಮುಖಾಂತರ ಗುಣಮಟ್ಟದ ತೊಗರಿ ಖರೀದಿ ಪ್ರಕ್ರಿಯೆ ಕೈಗೊಳ್ಳಲಾಗುತ್ತದೆ ಎಂದರು.

<><><><>

ಸಣ್ಣ ಹಣಕಾಸು ಸಂಸ್ಥೆಗಳು ಹಾಗೂ ಲೇವಾದೇವಿದಾರರು ಸಾಲ ವಸೂಲಾತಿ ಸಂದರ್ಭದಲ್ಲಿ ನೀಡುವ ಕಿರುಕುಳ ಹಾಗೂ ಬಲವಂತದ ವಸೂಲಾತಿಯನ್ನು ತಪ್ಪಿಸಲು ಕರ್ನಾಟಕ ಸಾಲ ಮತ್ತು ಸಣ್ಣ ಸಾಲ ಸುಲಿಗೆ ಅಕ್ರಮಗಳ ಪ್ರತಿಬಂಧಕ ಅಧ್ಯಾದೇಶ ೨೦೨೫ ಅನ್ನು ರಾಜ್ಯ ಸರ್ಕಾರ ಜಾರಿಗೊಳಿಸಿದೆ. ಮಂಡ್ಯ ಜಿಲ್ಲೆಯಲ್ಲಿ ಈ ಅಧ್ಯಾದೇಶ ಕಟ್ಟುನಿಟ್ಟಾಗಿ ಅನುಷ್ಠಾನವಾಗಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.  ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಕಂದಾಯ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಅಡಿ

ನೊಂದಣಿಯಾಗಿರುವ ಹಣಕಾಸು ಸಂಸ್ಥೆಗಳು, ಸಾಲ ವಸೂಲಾತಿಯನ್ನು ಆರ್‌ಬಿಐ ನಿಯಮಾನುಸಾರ ವಸೂಲಿ ಮಾಡಬೇಕು. ಉಲ್ಲಂಘನೆ ಕಂಡುಬಂದಲ್ಲಿ ಭಾರತೀಯ ನ್ಯಾಯ ಸಂಹಿತೆ ಅಡಿ ದೂರು ದಾಖಲಿಸಬಹುದು ಎಂದು ಹೇಳಿದರು.

<><><>

ಸಣ್ಣ ಹಣಕಾಸು ಸಂಸ್ಥೆಗಳು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಬಡ್ಡಿ ದರಗಳನ್ನು ಪ್ರದರ್ಶಿಸುವಂತೆ ಕ್ರಮಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳು ಮತ್ತು ಲೇವಾದೇವಿದಾರರ ಕಾರ್ಯವೈಖರಿಯ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ವ್ಯವಹರಿಸುತ್ತಿರುವ ಸಣ್ಣ ಹಣಕಾಸು ಸಂಸ್ಥೆಗಳು ಕಡ್ಡಾಯವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

<><><>

ಸಂಕ್ಷಿಪ್ತ ಸುದ್ದಿಗಳು

1. ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಬೆಳೆಯಲಾಗಿರುವ ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ನೀಡಿಕೆ ಹಾಗೂ ಆ ಬೆಳೆಗಾರರಿಗೆ ವಿಧಿಸಲಾಗುತ್ತಿದ್ದ ದಂಡ ಮನ್ನಾ ಮಾಡುವ ನಿರ್ಧಾರ ಕೈಗೊಂಡಿರುವ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯೂಷ್ ಗೋಯಲ್ ಅವರಿಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಧನ್ಯವಾದ ತಿಳಿಸಿದ್ದಾರೆ.
2. ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ ಬೆಂಗಳೂರಿನ ವಿಕಾಸಸೌಧದ ಕಚೇರಿಯಲ್ಲಿ ಆಯೋಜಿಸಿದ್ದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಆಯ್ಕೆಯಾದ ೫೦೦ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ೫ ಕೋಟಿ ರೂಪಾಯಿ ಸಾಲವನ್ನು ಕಂದಾಯ ಸಚಿವ ಕೃಷ್ಣ ಬೈರೇಗೌಡ ನೇರವಾಗಿ ವರ್ಗಾವಣೆ ಮಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>